# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಹೊಳಲ್ಕೆರೆ.

## ಸಿ.ಸಿ. ನಂ. 483/2024

ದಿನಾಂಕ 03/09/2025

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಕೇಶವ | ಪಿ.ಡಬ್ಲ್ಯು. | 2 |
| ತಂದೆಯ ಹೆಸರು | : | ಕರಿಯಪ್ಪ | ಸಿ.ಡಬ್ಲ್ಯು. | 2 |
| ವಯಸ್ಸು | : | 42 ವರ್ಷ | | |
| ಉದ್ಯೋಗ | : | ಕೂಲಿ ಕೆಲಸ | | |
| ವಾಸ ಸ್ಥಳ | : | ಹಾಲೇನಹಳ್ಳಿ | | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ಚಾಸಾ–1 ಮತ್ತು 3 ಗೊತ್ತು, ಅವರು ನಮ್ಮ ಊರಿನವರು.

ಈಗ ನನಗೆ ತೋರಿಸಿದ ಸ್ಥಳ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ–2 ಎಂದು ಗುರುತಿಸಲಾಗಿದ್ದು ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ನಿಪಿ–2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಒಂದೂವರೆ ವರ್ಷ ದ ಹಿಂದೆ ನಮ್ಮ ಊರಿನಲ್ಲಿ ಪೋಲಿಸರು ಬಂದು ಸಹಿ ಮಾಡು ಎಂದು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿ–2 ರ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಕ್ರಮ ಜರುಗಿಸಿರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿಗೆ ನಿಪಿಃ 3 ಮತ್ತು 4 ರ ಪೋಟೋಗಳನ್ನು ತೋರಿಸಲಾಗಿದ್ದು, ಸಾಕ್ಷಿಯು ಸದರಿ ಪೋಟೋಗಳನ್ನು ನೋಡಿ ಅದರಲ್ಲಿ ತಾನು ಮತ್ತು ಚಾಸಾ–3 ರವರು ಇರುವುದನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪೋಟೋಗಳನ್ನು ಯಾವ ಕಾರಣಕ್ಕೆ ಎಲ್ಲಿ

ತೆಗೆಯಲಾಗಿತ್ತು ಎಂದು ನನಗೆ ಗೊತ್ತಿಲ್ಲ. ಪೋಲೀಸರು ಊರಿನ ಇನ್ಸ್ಪೆಕ್ಷನ್ ಮಾಡಲು ಬಂದಿರುತ್ತೇವೆ ಪೋಟೋ ತೆಗೆಸಿಕೊಳ್ಳಿ ಎಂದು ತಿಳಿಸಿದ್ದರಿಂದ ನಾನು ನಿಂತು ಪೋಟೋ ತೆಗೆಸಿಕೊಂಡಿರುತ್ತೇನೆ.

ಈಗ ನನಗೆ ತೋರಿಸಿದ ವಾಹನ ಪರಿಶೀಲನಾ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸಾಕ್ಷಿಯು ವಾಹನ ಪರಿಶೀಲನಾ ಪಂಚನಾಮೆಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-6 ಮತ್ತು 6(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಒಂದೂವರೆ ವರ್ಷದ ಹಿಂದೆ ನಮ್ಮ ಊರಿನಲ್ಲಿ ಪೋಲಿಸರು ಬಂದು ಸಹಿ ಮಾಡು ಎಂದು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿ-6 ರ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಕ್ರಮ ಜರುಗಿಸಿರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿಗೆ 2 ಪೋಟೋಗಳನ್ನು ತೋರಿಸಲಾಗಿದ್ದು, ಸಾಕ್ಷಿಯು ಸದರಿ ಪೋಟೋಗಳನ್ನು ನೋಡಿ ಅದರಲ್ಲಿ ತಾನು ಮತ್ತು ಚಾಸಾ-3 ರವರು ಇರುವುದನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-7 ಮತ್ತು 8 ಎಂದು ಗುರುತಿಸಲಾಯಿತು. ಸದರಿ ಪೋಟೋಗಳನ್ನು ಯಾವ ಕಾರಣಕ್ಕೆ ಎಲ್ಲಿ ತೆಗೆಯಲಾಗಿತ್ತು ಎಂದು ನನಗೆ ಗೊತ್ತಿಲ್ಲ. ಪೊಲೀಸರು ಪೋಟೋ ತೆಗೆಸಿಕೊಳ್ಳಲು ತಿಳಿಸಿದ್ದರಿಂದ ಸದರಿ ಪೋಟೋಗಳನ್ನು ತೆಗೆಸಿಕೊಂಡಿರುತ್ತೇನೆ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ, ಅನುಮತಿ ನೀಡಲಾಯಿತು)**

## ಪಾಟೀಸವಾಲು : ಮಾನ್ಯ ಎ.ಪಿ.ಪಿ.ಯವರಿಂದ

ದಿನಾಂಕ 27/12/2023 ರಂದು ಪೋಲೀಸರು ಅಪಘಾತ ಸಂಭವಿಸಿದ ಸ್ಥಳದಲ್ಲಿ ಪಂಚನಾಮೆ ಕ್ರಮ ಜರುಗಿಸಲು ಬಂದಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ ಚಾ.ಸಾಃ 1 ಮತ್ತು 3 ರವರು ಹಾಜರಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ ಪೋಲೀಸರು ಅಪಘಾತದ ವಿಚಾರಗಳನ್ನೆಲ್ಲ ನನಗೆ ತಿಳಿಸಿ ಪಂಚರಾಗಿ ಸಹಕರಿಸಲು ಕೋರಿಕೊಂಡಿದ್ದರು ಎಂದರೆ ಸರಿಯಲ್ಲ. ಪಂಚನಾಮೆ ಕ್ರಮ ಜರುಗಿಸಲು ಸ್ಥಳವನ್ನು ಚಾ.ಸಾಃ 1 ರವರು ತೋರಿಸಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಸುಮಾರು ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ಜರುಗಿಸಿದ್ದರು ಎಂದರೆ ಸರಿಯಲ್ಲ. ಪಂಚನಾಮೆ ಕಾಲದಲ್ಲಿ

ಸ್ಥಳದಲ್ಲಿಯೇ ನಾನು ಮತ್ತು ಚಾ.ಸಾಃ 1 ಮತ್ತು 3 ರವರು ಹಾಜರಿದ್ದು, ನಿಪಿಃ 2 ರ ಎಲ್ಲ ವಿಚಾರಗಳನ್ನು ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿಃ 3 ಮತ್ತು 4 ರ ಪೋಟೋಗಳನ್ನು ಅಪಘಾತ ಸಂಭವಿಸಿದ ಸ್ಥಳದಲ್ಲಿ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 27/12/2023 ರಂದು ಪೊಲೀಸರು ನನ್ನನ್ನು ಮತ್ತು ಚಾಸಾ-3 ರವರನ್ನು ಠಾಣಾ ಆವರಣಕ್ಕೆ ಕರೆದುಕೊಂಡು ಹೋಗಿ ನಮ್ಮಗಳ ಸಮಕ್ಷಮ ನಿಪಿ-6 ರಂತೆ ವಾಹನ ಪರಿಶೀಲನಾ ಪಂಚನಾಮೆ ಕ್ರಮವನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-6 ರ ಪಂಚನಾಮೆ ಕಾಲಕ್ಕೆ ನಿಪಿ-7 ಮತ್ತು 8 ರ ಪೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಪಂಚನಾಮೆ ಕ್ರಮವನ್ನು ಜರುಗಿಸಿ ಅಪಘಾತಕ್ಕೀಡಾದ ವಾಹನಗಳನ್ನು ಅವುಗಳ ಮಾಲೀಕರ ವಶಕ್ಕೆ ನೀಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-2 ರಿಂದ 4 ಮತ್ತು 6 ರಿಂದ 8 ರ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲು – ಆರೋಪಿ ಪರ ವಕೀಲರಿಂದ – ಇರುವುದಿಲ್ಲ</u>**

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ.

C/C **ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.**